ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ,
ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **: 37/2021**

ಚಾ.ಸಾ. **:- 14**
ಪ್ರಾ.ಸಾ. **:- 03**

| | | |
|---|---|---|
| ಹೆಸರು | : | ರಾಮಲಿಂಗಯ್ಯ |
| ತಂದೆಯ ಹೆಸರು | : | ಲೇಟ್ ಲಿಂಗಯ್ಯ |
| ವಯಸ್ಸು | : | 63 ವರ್ಷ |
| ಉದ್ಯೋಗ | : | ನಿವೃತ್ತ ಎ.ಎಸ್.ಐ., |
| ವಾಸಸ್ಥಳ | : | ಮೈಸೂರು. |

ಪ್ರಮಾಣೀಕರಿಸಲಾದ ದಿನಾಂಕಃ**- 22.06.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು 2019 ರಿಂದ ಜುಲೈ-2023 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ.,ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 11.10.2020 ರಂದು ನಾನು ಠಾಣೆಯಲ್ಲಿ ಕರ್ತವ್ಯದಲ್ಲಿದ್ದಾಗ ಚಾ.ಸಾ-1 ರವರು ನೀಡಿದ ಲಿಖಿತ ದೂರನ್ನು ಪಡೆದುಕೊಂಡು ಪ್ರಕರಣವನ್ನು ದಾಖಲು ಮಾಡಿಕೊಂಡು, ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ನಂತರ ಕೃತ್ಯ ಸ್ಥಳಕ್ಕೆ ಹೋಗಿ ಪಂಚರ ಸಮಕ್ಷಮದಲ್ಲಿ ಕೃತ್ಯ ಸ್ಥಳದ ಮಹಜರನ್ನು ತಯಾರು ಮಾಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ಕಚ್ಚಾ ನಕಾಶೆಯನ್ನು ತಯಾರು ಮಾಡಿರುತ್ತೇನೆ ಹಾಗೂ ಅಪಘಾತ ಸ್ಥಳದ ಫೋಟೋಗಳನ್ನು ತೆಗೆಯಿಸಿರುತ್ತೇನೆ.

ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತಕ್ಕೆ ಸಂಬಂಧಿಸಿದಂತೆ 1 ವಾಹನವನ್ನು ಪಂಚರ ಸಮಕ್ಷಮ ಮಹಜರ್ ಬರೆದು ಅಮಾನತ್ತುಪಡಿಸಿಕೊಂಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು.

ನಂತರ ಅಪಘಾತಪಡಿಸಿದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ನಿಪಿ-6 ಮತ್ತು 7 ಎಂದು ಗುರುತಿಸಲಾಯಿತು. ಆರ್.ಟಿ.ಓ.ಅಧಿಕಾರಿಗಳು ವಾಹನವನ್ನು ಪರಿಶೀಲಿಸಿದ ನಂತರ ವಾಹನವನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ.

ಆರೋಪಿ ಠಾಣೆಗೆ ಹಾಜರಾಗಿದ್ದು, ಅವರಿಗೆ ನೋಟೀಸ್ ಜಾರಿ ಮಾಡಿ ಬಾಂಡ್ ಪಡೆದು ಜಾಮೀನಿನ ಮೇಲೆ ಅವರನ್ನು ಬಿಡುಗಡೆ ಮಾಡಿರುತ್ತೇನೆ.

ತನಿಖಾ ಸಮಯದಲ್ಲಿ ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ.

ನಂತರ, ಪ್ರಕರಣದ ಕಡತವನ್ನು ಪ್ರಕರಣದ ದಿನಚರಿಯೊಂದಿಗೆ ಚಾಸಾ-15 ರವರು ಪಡೆದುಕೊಂಡಿರುತ್ತಾರೆ.

<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>

ದೂರುದಾರರು ದೂರು ನೀಡುವಾಗ ಎಂ.ಎಲ್.ಸಿ.ವಹಿಯನ್ನು ನಮಗೆ ಕೊಟ್ಟಿರುವುದಿಲ್ಲ. ಶ್ರೀರಂಗಪಟ್ಟಣದ ಆಸ್ಪತ್ರೆಗೆ ಭೇಟಿ ನೀಡಿದಾಗ ಆಸ್ಪತ್ರೆಯವರಿಂದ ಎಂ.ಎಲ್.ಸಿ.ಗೆ ಸಂಬಂಧಿಸಿದಂತೆ ದಾಖಲೆ ಪಡೆದುಕೊಂಡಿರುತ್ತೇನೆ.

ಆರೋಪಿ ತಪ್ಪಿನಿಂದ ಅಪಘಾತವಾಗದೇ ಇದ್ದರೂ ದೂರುದಾರರ ಕುಟುಂಬಕ್ಕೆ ಸಹಾಯ ಮಾಡಲು ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಪ್ರಕರಣವನ್ನು ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಸ್ಥಳ ಪಂಚನಾಮೆಗೆ ಸಾಕ್ಷಿಯಾಗುವಂತೆ ಪಂಚರಿಗೆ ನೋಟೀಸ್ ಕೊಟ್ಟಿಲ್ಲ. ದೂರುದಾರರಿಗೆ ನೋಟೀಸ್ ಕೊಟ್ಟಿಲ್ಲ. ಸ್ಥಳ ಮಹಜರಿನಲ್ಲಿ ಫುಟ್‌ಪಾತ್ ಎಷ್ಟು ಅಡಿ ಇರುತ್ತದೆ ಎಂದು ನಮೂದು ಮಾಡಿಲ್ಲ ಎಂದರೆ ಸಾಕ್ಷಿ ಅಲ್ಲಿ ಫುಟ್‌ಪಾತ್ ಇರುತ್ತದೆ ಎನ್ನುತ್ತಾರೆ. ಸದರಿ ರಸ್ತೆಯಲ್ಲಿ ಹಳೇ ಕಿರಂಗೂರು ಜಾಗದಿಂದ ಅಮರಾವತಿ ಪೆಟ್ರೋಲ್ ಬಂಕ್ ವರೆಗೆ ರಸ್ತೆಯ ಎರಡೂ ಬದಿಗಳಲ್ಲಿ ಮನೆಗಳಿವೆ ಎಂದರೆ ಸರಿ. ನಿಪಿ-2 ರಲ್ಲಿ ತೋರಿಸಿರುವ ಬಾಬುರಾಯನಕೊಪ್ಪಲು ಕಡೆಗೆ ಹೋಗುವ ರಸ್ತೆಯಲ್ಲಿ ಒಂದು ರಸ್ತೆ ಉಬ್ಬು ಇರುತ್ತದೆ ಎಂದರೆ ಇಲ್ಲ. ನಿಪಿ-2 ರಲ್ಲಿರುವ ಕಚ್ಚಾ ನಕಾಶೆಯಲ್ಲಿ "- - - - - - - - " ಎಂದು ತೋರಿಸಿರುವ ಜಾಗ ರಸ್ತೆ ಉಬ್ಬು ಆಗಿರುತ್ತದೆ. ಶ್ರೀರಂಗಪಟ್ಟಣದಿಂದ ಪಾಂಡವಪುರದ ಕಡೆಗೆ ಹೋಗುವ ರಸ್ತೆಯ ಬಳಿ ಸಹ ಒಂದು ರಸ್ತೆ ಉಬ್ಬು ಇರುತ್ತದೆ ಎಂದರೆ ಸರಿ. ಸದರಿ ರಸ್ತೆ ಉಬ್ಬನ್ನು ಕಚ್ಚಾ ನಕಾಶೆಯಲ್ಲಿ ತೋರಿಸಿಲ್ಲ ಎಂದರೆ ಸಾಕ್ಷಿ ಅದು ಸುಮಾರು 150 ಅಡಿ ದೂರದಲ್ಲಿರುವ ಕಾರಣ ತೋರಿಸಿಲ್ಲ ಎನ್ನುತ್ತಾರೆ. ಕಚ್ಚಾ ನಕಾಶೆಯಲ್ಲಿ ರಕ್ತದ ಕಲೆ ಇರುತ್ತದೆ ಎಂದು ತೋರಿಸಿದ್ದು, ಅದು ಫುಟ್‌ಪಾತ್ ನಿಂದ ಎಷ್ಟು ಅಡಿ ದೂರದಲ್ಲಿರುತ್ತದೆ ಎಂದು ತೋರಿಸಿಲ್ಲ ಎಂದರೆ ಸರಿ, ಸಾಕ್ಷಿ ಅದು ರಸ್ತೆಯ ಅಂಚಿನಲ್ಲಿರುತ್ತದೆ ಎನ್ನುತ್ತಾರೆ. ಸದರಿ ರಕ್ತದ ಕಲೆ ಇರುವ ಜಾಗದ ಫೋಟೋ ತೆಗೆದಿರುತ್ತೇನೆ.

ಮೃತ ಕರಿಘಟ್ಟಯ್ಯ ಯಾವ ಕಡೆ ಮುಖ ಮಾಡಿಕೊಂಡು ಹೋಗುತ್ತಿದ್ದರು ಎಂದು ದೂರಿನಲ್ಲಿ, ಮಹಜರಿನಲ್ಲಿ ಬರೆದಿಲ್ಲ ಎಂದರೆ ಸರಿ. ಆರೋಪಿ ಮತ್ತು RC ಮಾಲೀಕರು ವಾಹನವನ್ನು ನಮ್ಮ ಠಾಣೆಯಲ್ಲಿ ನಿಪಿ-4 ನ್ನು ಮಾಡುವ ಸಂದರ್ಭದಲ್ಲಿ ಹಾಜರುಪಡಿಸಿರುತ್ತಾರೆ. ಅದೇ ದಿನ ಮಾಲೀಕರಿಗೆ ನೋಟೀಸ್ ನೀಡಿರುತ್ತೇನೆ. ಸಾಕ್ಷಿದಾರರಿಗೆ ಫೋನ್ ಮಾಡಿ ಠಾಣೆಗೆ ಕರೆಯಿಸಿಕೊಂಡು ಹೇಳಿಕೆ ಪಡೆದುಕೊಂಡಿರುತ್ತೇನೆ. ಸಾಕ್ಷಿದಾರರ ಹೇಳಿಕೆಗಳನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಸ್ಥಳದಲ್ಲಿ ಮಹಜರ್

ಮಾಡಿಲ್ಲ ಹಾಗೂ ಪಂಚರ ಸಹಿ ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ.

ಮೃತರ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ **:-** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**